(2)

11976

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಗಳಡಿ ಮತ್ಸ್ಯಾಶ್ರಯ ಯೋಜನೆಯಡಿ ಮಂಜೂರಾಗಿರುವ ಮನೆಗಳ ನಿರ್ಮಾಣ ಘಟಕದ ಅನುದಾನವನ್ನು ಕರ್ನಾಟಕ ಮೀನುಗಾರಿಕಾ ಅಭಿವೃದ್ಧಿ ನಿಗಮದಲ್ಲಿ ಠೇವಣಿ ಇಡುವಿಕೆ.

ಓದಲಾಗಿದೆ:- (1) ಆದೇಶ ಸಂಖ್ಯೆ:ಪಸಂಮೀ/161/ಮೀಇಯೋ/2010 (ಭಾಗ-1) ದಿನಾಂಕ:21-08-2010.

(2) ಆದೇಶ ಸಂಖ್ಯೆ:ಪಸಂಮೀ/161/ಮೀಇಯೋ/2010 ದಿನಾಂಕ:11-11-2010.

(3) ಪತ್ರ ಸಂಖ್ಯೆ:ವಿಘಯೋ/17/2010-11 ದಿನಾಂಕ:11-01-2011.

******

22 FEB 2011

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1) ಮತ್ತು (2)ರಲ್ಲಿ ಓದಲಾದ ಆದೇಶಗಳಲ್ಲಿ 2010-11ನೇ ಸಾಲಿನ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಗಳಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ 800 ಫಲಾನುಭವಿಗಳಿಗೆ ತಲಾ ರೂ.40,000-00 ವೆಚ್ಚದಲ್ಲಿ ಮನೆಗಳ ನಿರ್ಮಾಣ ಯೋಜನೆಗೆ ಒಟ್ಟು ರೂ.320.00 ಲಕ್ಷ ಅನುದಾನವನ್ನು ಮಂಜೂರು ಮಾಡಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (3) ಓದಲಾದ ಮೀನುಗಾರಿಕೆ ನಿರ್ದೇಶಕರ ಪತ್ರದಲ್ಲಿ ಪ್ರತಿ ಫಲಾನುಭವಿಯ ಮನೆ ನಿರ್ಮಾಣ ಪ್ರಾರಂಭಿಸಿದ ನಂತರ ನಿರ್ಮಾಣ ಹಂತ ಪರಿಶೀಲಿಸಿ ಮಾರ್ಚ್ 2011ರ ಒಳಗೆ ರೂ.40,000-00ಗಳನ್ನು ಮೂರು ಕಂತುಗಳಲ್ಲಿ ಬಿಡುಗಡೆ ಮಾಡಲು ಕಷ್ಟವಾಗುವುದರಿಂದ, ಲಭ್ಯವಿರುವ ರೂ.320.00 ಲಕ್ಷ ಅನುದಾನವನ್ನು ಮೀನುಗಾರಿಕಾ ನಿರ್ದೇಶಕರು ರಾಜ್ಯ ಹುಜೂರ್ ಖಜಾನೆಯಿಂದ ಸೆಳೆದು ಮತ್ಸ್ಯಾಶ್ರಯ ಯೋಜನೆ ಅನುಷ್ಠಾನ ಸಂಸ್ಥೆಯಾಗಿರುವ ಕರ್ನಾಟಕ ಮೀನುಗಾರಿಕಾ ಅಭಿವೃದ್ಧಿ ನಿಗಮದಲ್ಲಿ ಠೇವಣಿ ಇರಿಸಿ ಫಲಾನುಭವಿಗಳ ಮನೆಗಳ ನಿರ್ಮಾಣದ ಪ್ರಗತಿಗನುಗುಣವಾಗಿ ಮೂರು ಕಂತುಗಳಲ್ಲಿ ನಗದು ಹುಂಡಿಗಳ ಮೂಲಕ ಪಾವತಿಸಲು ಅನುಮತಿ ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ:ಪಸಂಮೀ/161/ಮೀಇಯೋ/2010, ಬೆಂಗಳೂರು ದಿನಾಂಕ:21-02-2011**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ಮತ್ಸ್ಯಾಶ್ರಯ ಯೋಜನೆ ಅನುಷ್ಠಾನಕ್ಕಾಗಿ 2010-11ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2405-00-789-0-03 (ಯೋಜನೆ)ಯ ಉಪಶೀರ್ಷಿಕೆ -422 (ವಿಶೇಷ ಘಟಕ ಯೋಜನೆ) ಅಡಿ ರೂ.100.00 ಲಕ್ಷ ಮತ್ತು ಲೆಕ್ಕ ಶೀರ್ಷಿಕೆ 2405-00-796-0-00 (ಯೋಜನೆ)ಯ ಉಪ ಶೀರ್ಷಿಕೆ-423 (ಗಿರಿಜನ ಉಪಯೋಜನೆ) ಅಡಿ ರೂ.100.00 ಲಕ್ಷ ಹೀಗೆ ಒಟ್ಟು ರೂ.200.00 ಲಕ್ಷ (ಇನ್ನೂರು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಬಿಡುಗಡೆಗೊಳಿಸಲಾಗಿದೆ.

ಮೇಲ್ಕಂಡ ಮೊತ್ತವನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಮಂಗಳೂರು (ಮತ್ಸ್ಯಾಶ್ರಯ ಯೋಜನೆಯ ನೋಡಲ್/ಅನುಷ್ಠಾನ ಸಂಸ್ಥೆ) ಇವರು ಸಲ್ಲಿಸುವ ಪೇಯೀಸ್ ರಸೀದಿಗೆ ಮೀನುಗಾರಿಕೆ ನಿರ್ದೇಶಕರು, ಬೆಂಗಳೂರುರವರು ಮೇಲು ರುಜು ಮಾಡಿ ರಾಜ್ಯ ಹುಜೂರ್ ಖಜಾನೆಯಿಂದ ಸೆಳೆದು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದಲ್ಲಿ ಠೇವಣಿ ಇರಿಸಲು ಅನುಮತಿ ನೀಡಲಾಗಿದೆ.

ನಿಗದಿತ ಕಾಲಮಿತಿಯೊಳಗೆ ನಿಯಮಾನುಸಾರ ಮನೆಗಳ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಬೇಕೆಂಬ ಷರತ್ತಿಗೊಳಪಟ್ಟು ಮನೆಗಳ ನಿರ್ಮಾಣದ ಪ್ರಗತಿಗೆ ಅನುಗುಣವಾಗಿ ಮೂರು ಕಂತುಗಳಲ್ಲಿ ನಗದು ಹುಂಡಿಗಳ ಮೂಲಕ ಫಲಾನುಭವಿಗಳಿಗೆ ಪಾವತಿಸಲು ಕರ್ನಾಟಕ ಮೀನುಗಾರಿಕಾ ಅಭಿವೃದ್ಧಿ ನಿಗಮಕ್ಕೆ ಅನುಮತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
ಡಿ.ಎಂ. ರಾಜಣ್ಣ 21/2
(ಡಿ.ಎಂ.ರಾಜಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ(ಮೀ)
21/2

ಇವರಿಗೆ:

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
3) ಎಲ್ಲಾ ಮೀನುಗಾರಿಕೆ ಉಪ ನಿರ್ದೇಶಕರಗಳಿಗೆ (ಮೀನುಗಾರಿಕೆ ನಿರ್ದೇಶಕರ ಮುಖಾಂತರ)
4) ಜಂಟಿ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
5) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ.
6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 ಮತ್ತು 5)
7) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8) ಶಾಖಾ ರಕ್ಷಾ ಕಡತ:ಹೆಚ್ಚಿನ ಪ್ರತಿಗಳು.